**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ:22:ಇತರೆ:2020-21:ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:03.03.2022

# ಸುತ್ತೋಲೆ

**ವಿಷಯ:** ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಕೇಂದ್ರ ಕಛೇರಿ, ಪ್ರಾದೇಶಿಕ ಕಛೇರಿ ಮತ್ತು ಪದವಿ ಕಾಲೇಜುಗಳಲ್ಲಿ ದೀರ್ಘವಧಿ ರಜೆ ತೆರಳುವ ಪೂರ್ವ ಅನುಮತಿ ಪಡೆಯುವ ಕುರಿತು.

** ** **

ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಕೇಂದ್ರ ಕಛೇರಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಮತ್ತು ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಪದವಿ, ಕಾನೂನು, ಬಿ.ಎಡ್ ಮತ್ತು ಚಿತ್ರಕಲಾ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ದೀರ್ಘವಧಿ ರಜೆಗಳಾದ ಗಳಿಕೆ ರಜೆ, ಅರ್ಧವೇತನ ರಜೆ, ಶಿಶುಪಾಲನಾ ರಜೆ, ಮಾತೃತ್ವ ರಜೆ, ಪಿತೃತ್ವ ರಜೆ, ಮತ್ತು ಅಸಾಧಾರಣ ರಜೆ ಮುಂತಾದವುಗಳನ್ನು ಆಯಾಯ ಕಛೇರಿ/ಕಾಲೇಜುಗಳ ಸಂಬಂಧಪಟ್ಟ ಪ್ರಾಧಿಕಾರಿಗಳಿಗೆ ರಜೆ ಅರ್ಜಿ ಸಲ್ಲಿಸದೇ ಅಥವಾ ರಜೆ ಅರ್ಜಿ ಸಲ್ಲಿಸಿದ ತಕ್ಷಣ ಅಥವಾ ರಜೆ ಮಂಜೂರು ಮಾಡುವ ಪೂರ್ವದಲ್ಲಿ ರಜೆ ಮೇಲೆ ತೆರಳಿ, ನಂತರ ರಜೆ ಮಂಜೂರಾತಿಗೆ ಕ್ರಮವಹಿಸುತ್ತಿರುವುದನ್ನು ಗಮನಿಸಲಾಗಿದೆ. ಇಲಾಖೆಯ ಕಛೇರಿ/ಕಾಲೇಜುಗಳ ದೈನಂದಿನ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಕಾರ್ಯಗಳನ್ನು ನಿರ್ವಹಿಸಲು ಸಿಬ್ಬಂದಿಗಳ ಕೊರತೆ ಒಂದು ಕಡೆಯಾದರೆ, ಇರುವ ಸಿಬ್ಬಂದಿಗಳು ಸಕ್ಷಮ ಪ್ರಾಧಿಕಾರಿಗಳಿಂದ ರಜೆ ಮಂಜೂರಾತಿ ಪೂರ್ವದಲ್ಲಿ ದೀರ್ಘವಧಿ ರಜೆಯ ಮೇಲೆ ತೆರಳಿದರೆ ಕಛೇರಿ/ಕಾಲೇಜುಗಳ ಕಾರ್ಯಗಳನ್ನು ನಿರ್ವಹಿಸಲು ಬದಲಿ ವ್ಯವಸ್ಥೆ ಮಾಡಿಕೊಳ್ಳುವಲ್ಲಿ ತುಂಬಾ ತೊಂದರೆಯಾಗುತ್ತಿರುವುರಿಂದಾಗಿ ಕಛೇರಿ ಕಾರ್ಯಗಳನ್ನು ಸಕಾಲದಲ್ಲಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ.

ಈ ಎಲ್ಲಾ ಕಾರಣಗಳಿಂದ ಇನ್ನು ಮುಂದೆ ಇಲಾಖಾ ವ್ಯಾಪ್ತಿಯಲ್ಲಿ ಬರುವ ಕೇಂದ್ರ ಕಛೇರಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಮತ್ತು ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಪದವಿ, ಕಾನೂನು, ಬಿ.ಎಡ್ ಮತ್ತು ಚಿತ್ರಕಲಾ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ದೀರ್ಘವಧಿ ರಜೆಗಳಾದ ಗಳಿಕೆ ರಜೆ, ಅರ್ಧವೇತನ ರಜೆ, ಶಿಶುಪಾಲನಾ ರಜೆ, ಮಾತೃತ್ವ ರಜೆ, ಪಿತೃತ್ವ ರಜೆ, ಮತ್ತು ಅಸಾಧಾರಣ ರಜೆ ಮುಂತಾದ ರಜೆ ಅಗತ್ಯವಿದ್ದಲ್ಲಿ ಸದರಿ ರಜೆಯ ಮಂಜೂರಾತಿ ಕುರಿತು ಲಿಖಿತ ರೂಪದಲ್ಲಿ ನಿಗದಿತ ಅರ್ಜಿಯೊಂದಿಗೆ ರಜೆ ಅಗತ್ಯವಿರುವ ಕಾರಣ ಸಹಿತ ಪೂರ್ಣಮಾಹಿತಿಯನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳ ಗಮನಕ್ಕೆ ತಂದು, ಮಂಜೂರಾತಿ ಪಡೆದ, ನಂತರವೇ ರಜೆ ಮೇಲೆ ತೆರಳಲು ಸೂಚಿಸಲಾಗಿದೆ.

03/03/2022

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

ಇವರಿಗೆ:

1) ಕೇಂದ್ರ ಕಛೇರಿಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ – ಮಾಹಿತಿ ಹಾಗೂ ಸಕ್ಷಮ ಪ್ರಾಧಿಕಾರವಾದ ಮುಖ್ಯ ಆಡಳಿತಾಧಿಕಾರಿಯವರ ಅನುಮತಿ ಪಡೆಯತಕ್ಕದ್ದು.
2) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ – ಮಾಹಿತಿ ಹಾಗೂ ಸಕ್ಷಮ ಪ್ರಾಧಿಕಾರವಾದ ಜಂಟಿ ನಿರ್ದೇಶಕರವರ ಅನುಮತಿ ಪಡೆಯತಕ್ಕದ್ದು.

3) ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಪದವಿ, ಕಾನೂನು, ಬಿ.ಎಡ್ ಮತ್ತು ಚಿತ್ರಕಲಾ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು – ಮಾಹಿತಿ ಹಾಗೂ ಸಕ್ಷಮ ಪ್ರಾಧಿಕಾರವಾದ ಆಯಾಯ ಕಾಲೇಜಿನ ಪ್ರಾಂಶುಪಾಲರುಗಳ ಅನುಮತಿ ಪಡೆಯತಕ್ಕದ್ದು.
4) ಈ ಕಛೇರಿಯ ಎಲ್ಲಾ ಅಧಿಕಾರಿಗಳ ಆಪ್ತ ಶಾಖೆಗೆ
5) ಕಛೇರಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ ಮತ್ತು ನೌಕರರಿಗೆ
6) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು)
7) ಕಛೇರಿ ಪ್ರತಿ